# ಕರ್ನಾಟಕ ವಿಧಾನ ಪರಿಷತ್ತು

**ವಿಷಯ: ಶ್ರೀ ಪ್ರಕಾಶ್ ಕೆ. ರಾಥೋಡ್, ವಿಧಾನ ಪರಿಷತ್ ಸದಸ್ಯರು ಇವರು ನಿಯಮ 72ರಡಿ" ಆಯುಷ್ ವೈದ್ಯರುಗಳು ಆಲೋಪತಿ ವೈದ್ಯರುಗಳಿಗೆ ಕೆಲಸದ ಒತ್ತಡ ವಿಭಿನ್ನವಾಗಿಲ್ಲದಿದ್ದರೂ ಈ ವೈದ್ಯರಿಗೆ ಇರುವ ವೇತನ ತಾರತಮ್ಯ ಸರಿಪಡಿಸುವುದು ಹಾಗೂ ರಾಜ್ಯದಲ್ಲಿ ಆಯುಷ್ ಇಲಾಖೆಯ ವ್ಯಾಪ್ತಿಯಲ್ಲಿ ಇರುವ ಜಿಲ್ಲಾ ಮತ್ತು ತಾಲ್ಲೂಕು ಆಯುಷ್ ಆಸ್ಪತ್ರೆಗಳಲ್ಲಿ ಸೃಜನೆಯಾಗಿರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಮತ್ತು ಅವಶ್ಯ ಇರುವ ಎಲ್ಲಾ ಆಸ್ಪತ್ರೆಗಳಿಗೆ ಆಯುಷ್ ವೈದ್ಯರನ್ನು ಕಡ್ಡಾಯವಾಗಿ ನೇಮಿಸುವ " ಬಗ್ಗೆ:-**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಉತ್ತರ:-**

- ಆಯುಷ್ ವೈದ್ಯರುಗಳಿಗೆ ಆಲೋಪತಿ ವೈದ್ಯರುಗಳಿಗಿರುವ ಕೆಲಸದ ಒತ್ತಡ ವಿಭಿನ್ನವಾಗಿಲ್ಲದ ಹಿನ್ನೆಲೆಯಲ್ಲಿ ಸಚಿವ ಸಂಪುಟದ ತೀರ್ಮಾನದ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ : ಆಕುಕ 357 ಪಿಐಎಂ 2012, ದಿನಾಂಕ:31-07-2013ರಲ್ಲಿ ಸಮಾನ ವೇತನದ ಜೊತೆಗೆ 06, 13 ಮತ್ತು 20 ವರ್ಷಗಳ ಕಾಲಬದ್ಧ ಮುಂಬಡ್ತಿ ಹಾಗೂ ವಿಶೇಷ ಭತ್ಯೆಗಳನ್ನು ಸಮಾನಾಂತರವಾಗಿ ವಿಸ್ತರಿಸಲಾಗಿದೆ.

- ಮುಂದುವರೆದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ವೈದ್ಯರುಗಳಿಗೆ ವಿಶೇಷ ಭತ್ಯೆಯನ್ನು ಪರಿಷ್ಕರಿಸಿದಂತೆ ಆಯುಷ್ ಇಲಾಖೆಯ ವೈದ್ಯರುಗಳಿಗೂ ಸಹ ಸರ್ಕಾರದ ಆದೇಶ ಸಂಖ್ಯೆ : ಆಕುಕ 358 ಪಿಐಎಂ 2016, ಬೆಂಗಳೂರು, ದಿನಾಂಕ:18-08-2016 ರನ್ವಯ ವಿಶೇಷ ಭತ್ಯೆಯನ್ನು ಸಮಾನಾಂತರವಾಗಿ ದಿನಾಂಕ:30-08-2020 ರವರೆಗೆ ನೀಡಲಾಗಿದ್ದು, ಸರ್ಕಾರದ ಆದೇಶ ಸಂಖ್ಯೆ: ಆಕುಕ 449 ಹೆಚ್‌ಎಸ್‌ಹೆಚ್ 2020, ದಿನಾಂಕ:21-12-2020 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯರುಗಳಿಗೆ ವಿಶೇಷ ಭತ್ಯೆಯನ್ನು ಪರಿಷ್ಕರಿಸಲಾಗಿದೆ.

- ಆಯುಷ್ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಮಂಜೂರಾಗಿ ಖಾಲಿಯಿರುವ ಹುದ್ದೆಗಳನ್ನು ಒಳಗೊಂಡಂತೆ, ಪ್ರಸ್ತುತ ಖಾಲಿಯಿರುವ ಒಟ್ಟು 223 ವಿವಿಧ ಪದ್ಧತಿಯ ಆಯುಷ್ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಸ್ವೀಕೃತವಾದ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

- ಅವಶ್ಯವಿರುವ ಎಲ್ಲಾ ಆಸ್ಪತ್ರೆಗಳಿಗೆ ಆಯುಷ್ ವೈದ್ಯರನ್ನು ಕಡ್ಡಾಯವಾಗಿ ನೇಮಿಸುವ ಕುರಿತು ಸ್ವೀಕೃತವಾದ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

**ಆಕುಕ/ ನಿಯಮ 72/2023**

**ದಿನೇಶ್ ಗುಂಡೂರಾವ್**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

Scanned with OKEN Scanner